# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20ನೇ ಸಾಲಿನ "ಸಾಹಿತ್ಯ ಸಂಸ್ಕೃತಿ ವಿಭಾಗ"ದ ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡುವ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 45 ಕಸಧ 2020, ದಿ:20-01-2020.
2.ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಇವರ ಪತ್ರ ಸಂಖ್ಯೆ: ಡಿಕೆಸಿ:11018/1/2019-20, ದಿನಾಂಕ:03-03-2020.

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2019-20ನೇ ಸಾಲಿನ ಸಾಹಿತ್ಯ ಸಂಸ್ಕೃತಿ ವಿಭಾಗದ ಪ್ರಶಸ್ತಿಗೆ (ಸಂಗೊಳ್ಳಿ ರಾಯಣ್ಣ ಪ್ರಶಸ್ತಿ, ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ, ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ, ಅಕ್ಕಮಹಾದೇವಿ ಪ್ರಶಸ್ತಿ) ಅರ್ಹರನ್ನು ಆಯ್ಕೆ ಮಾಡಲು ಶ್ರೀ ಮಲ್ಲೇಪುರಂ ಜಿ. ವೆಂಕಟೇಶ್ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಆಯ್ಕೆ ಸಮಿತಿಯು 2019-20ನೇ ಸಾಲಿನ ಸಾಹಿತ್ಯ ಸಂಸ್ಕೃತಿ ವಿಭಾಗದ ಪ್ರಶಸ್ತಿಗೆ (ಸಂಗೊಳ್ಳಿ ರಾಯಣ್ಣ ಪ್ರಶಸ್ತಿ, ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ, ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ, ಅಕ್ಕಮಹಾದೇವಿ ಪ್ರಶಸ್ತಿ) ಸಂಬಂಧಿಸಿದಂತೆ, ಆಯ್ಕೆ ಸಮಿತಿಯ ಸಭೆಯಲ್ಲಿ ಸಾಹಿತ್ಯ ಪ್ರಶಸ್ತಿಗೆ ಸಮಿತಿಯು ಒಮ್ಮತದಿಂದ ಆಯ್ಕೆ ಮಾಡಿರುವ ಅರ್ಹ ಕಲಾವಿದರ ಪಟ್ಟಿಯನ್ನು ಲಗತ್ತಿಸಿ ಕಳುಹಿಸಿರುವ ವರದಿಯನ್ನು ಒಪ್ಪಿ, ಈ ಬಗ್ಗೆ ಸರ್ಕಾರದ ಆದೇಶ ಹೊರಡಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 126 ಕಸಧ 2020, ಬೆಂಗಳೂರು, ದಿನಾಂಕ:21-03-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯ್ಕೆ ಸಮಿತಿಯ ಶಿಫಾರಸ್ಸನ್ನು ಅಂಗೀಕರಿಸಿ 2019-20ನೇ ಸಾಲಿನ ಸಾಹಿತ್ಯ ಸಂಸ್ಕೃತಿ ವಿಭಾಗದ ಪ್ರಶಸ್ತಿ (ಸಂಗೊಳ್ಳಿ ರಾಯಣ್ಣ ಪ್ರಶಸ್ತಿ, ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ, ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ, ಅಕ್ಕಮಹಾದೇವಿ ಪ್ರಶಸ್ತಿ)ಗಳಿಗೆ ಈ ಕೆಳಕಂಡ ಕಲಾವಿದರುಗಳಿಗೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸಂ. | ಪ್ರಶಸ್ತಿ ಹೆಸರು | ಸಾಧಕರ ಹೆಸರು |
|---|---|---|
| 1. | ಸಂಗೊಳ್ಳಿ ರಾಯಣ್ಣ ಪ್ರಶಸ್ತಿ | ಶ್ರೀ ರಾ.ನಂ.ಚಂದ್ರಶೇಖರ, ಬೆಂಗಳೂರು |
| 2. | ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿ | ಡಾ॥ ಚೂಡಾಮಣಿ ನಂದಗೋಪಾಲ್, ಬೆಂಗಳೂರು |
| 3. | ಪ್ರೊ. ಕೆ.ಜಿ. ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿ | ಪ್ರೊ॥ ಸಿದ್ಧಣ್ಣ ಉತ್ನಾಳ್, ಬೆಳಗಾವಿ |
| 4. | ಅಕ್ಕಮಹಾದೇವಿ ಪ್ರಶಸ್ತಿ | ಡಾ॥ ಜಯಶ್ರೀದಂಡೆ, ಕಲಬುರಗಿ |

11687
23/3/2020

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/3/20
(ಪಿ.ಎಸ್. ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ ಶಾಖೆ)

ಗೆ,

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಪಿಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಪ್ರಶಸ್ತಿ ವಿಜೇತರಿಗೆ (ನಿರ್ದೇಶಕರ ಮುಖಾಂತರ)
4. ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.